ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿ
"ಅಭಿವೃದ್ಧಿ ಭವನ" ಐವಾನ-ಎ-ಶಾಹಿ, ಕಲಬುರಗಿ-585102
ದೂರವಾಣಿ: (08472) - 256767,239556,255564, ಫ್ಯಾಕ್ಸ್ :(08472) 227527
Email:hkabdgulb@gmail.com, hkrdbklb@gmail.com Website: hkrdb.kar.nic.in

ಸಂ: ಹೈ.ಕ.ಪ್ರ.ಅ.ಮಂ/ಸಿಬ್ಬಂದಿ/15/2019-20 14089 ದಿನಾಂಕ: 25.02.2020

**ಪ್ರಕಟಣೆ**

ವಿಷಯ:- ಹೈ ಕ ಪ್ರ ಅ ಮಂಡಳಿ, ಕಲಬುರಗಿ ಕಾರ್ಯಲಯದಲ್ಲಿ ಮಂಜೂರಾಗಿ ತೆರವಾಗಿರುವ ಹುದ್ದೆಗಳಿಗೆದುರಾಗಿ ನಿವೃತ್ತ ಅಧಿಕಾರಿ/ಸಿಬ್ಬಂದಿಯವರನ್ನು ಹೊರಗುತ್ತಿಗೆ ಆಧಾರದ ಮೇಲೆ ನೇಮಿಸಿಕೊಳ್ಳುವ ಕುರಿತು.

ಉಲ್ಲೇಖ:- ಸರ್ಕಾರದ ಪತ್ರ ಸಂಖ್ಯೆ: ಯೋಇ 83 ಹೈಕವಿ 2018 ಬೆಂಗಳೂರು ದಿನಾಂಕ 04.05.2019.

*~*~*

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರದ ಪತ್ರದನ್ವಯ ಹೈದ್ರಾಬಾದ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯಲ್ಲಿ ಮಂಜೂರಾಗಿ ತೆರವಾಗಿರುವ ಖಾಲಿ ಹುದ್ದೆಗಳಿಗೆ ನಿವೃತ್ತ ಅಧಿಕಾರಿ/ಸಿಬ್ಬಂದಿಯವರನ್ನು ಹೊರಗುತ್ತಿಗೆ ಆಧಾರದ ಮೇಲೆ ಪಡೆಯಲು ಒಪ್ಪಿಗೆ ನೀಡಿರುತ್ತದೆ. ಆ ಪ್ರಯುಕ್ತ ಹೈ.ಕ.ಪ್ರ.ಅ.ಮಂಡಳಿ ಕಲಬುರಗಿ ಕಾರ್ಯಾಲಯಕ್ಕೆ ಈ ಕೆಳಕಂಡ ಹುದ್ದೆಗಳಿಗೆ ನಿವೃತ್ತ ಅಧಿಕಾರಿ/ಸಿಬ್ಬಂದಿಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ತೆಗೆದುಕೊಳ್ಳಲಾಗುತ್ತಿದೆ. ಅವಶ್ಯಕ ಹುದ್ದೆಗಳ ವಿವರ ಈ ಕೆಳಗಿನಂತಿದೆ.

| ಕ್ರಮ ಸಂಖ್ಯೆ | ಹುದ್ದೆ | ಸಂಖ್ಯೆ | ಸಾಮರ್ಥ್ಯ |
|---|---|---|---|
| 1] | ಕಾರ್ಯನಿರ್ವಾಹಕ ಅಭಿಯಂತರರು | 02 | PWD, PRED, MI, RWS, KUWS&DB & KRIDL ಇಲಾಖೆಗಳ ನಿವೃತ್ತ ಕಾರ್ಯನಿರ್ವಾಹಕ ಅಭಿಯಂತರರು ಹಾಗೂ ಕನಿಷ್ಠ 05 ವರ್ಷಗಳ ಅನುಭವ ಹೊಂದಿರುವ ನಿವೃತ್ತ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು. |
| 2] | ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು | 01 | PWD, PRED, MI, RWS, KUWS&DB & KRIDL ಇಲಾಖೆಗಳ ನಿವೃತ್ತ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಹಾಗೂ ಕನಿಷ್ಠ 05 ವರ್ಷಗಳ ಅನುಭವ ಹೊಂದಿರುವ ನಿವೃತ್ತ ಸಹಾಯಕ ಅಭಿಯಂತರರು. |

ಸದರಿ ನಿವೃತ್ತ ಅಧಿಕಾರಿ/ಸಿಬ್ಬಂದಿಯವರನ್ನು ಈ ಕೆಳಗಿನಂತೆ ಷರತ್ತುಗಳ ಅನ್ವಯ ಹೊರಗುತ್ತಿಗೆ ಆಧಾರದ ಮೇಲೆ ಪಡೆದುಕೊಳ್ಳಲಾಗುತ್ತದೆ.

1] ನಿವೃತ್ತ ಅಧಿಕಾರಿ/ಸಿಬ್ಬಂದಿಯವರ ವಯಸ್ಸು 65 ವರ್ಷ ಮೀರಿರಬಾರದು.

2] ನಿವೃತ್ತ ಅಧಿಕಾರಿ/ಸಿಬ್ಬಂದಿಯವರು ತಮ್ಮ ಪಿಂಚಣಿ ಪತ್ರದ ಪ್ರತಿಯನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು.

3] ನಿವೃತ್ತ ಅಧಿಕಾರಿ/ಸಿಬ್ಬಂದಿಯವರನ್ನು ಹೊರಗುತ್ತಿಗೆ ಆಧಾರದ ಮೇಲೆ ಗರಿಷ್ಠ ಒಂದು ವರ್ಷದ ಅವಧಿಗೆ ಮಾತ್ರ ಪಡೆದುಕೊಳ್ಳಲಾಗುವುದು.

4] ನಿವೃತ್ತ ಅಧಿಕಾರಿ/ಸಿಬ್ಬಂದಿಯವರು ಅವರು ನೀಡುವ ಸೇವೆಯ ಆಧಾರದ ಮೇಲೆ ಅವರ ಸೇವೆಯನ್ನು ಮುಂದುವರೆಸುವ ಹಾಗೂ ಸದರಿಯವರ ಕಾರ್ಯಕ್ಷಮತೆಯಲ್ಲಿ ಸೂಕ್ತತೆ ಇಲ್ಲದಿದ್ದರೆ ಅವರ ಸೇವೆಯನ್ನು ರದ್ದುಪಡಿಸುವ ಅಧಿಕಾರ ಪ್ರಾಧಿಕಾರಿಗಳಿಗೆ ಇರುತ್ತದೆ.

ಆದ್ದರಿಂದ ಆಸಕ್ತಿಯುಳ್ಳ ನಿವೃತ್ತ ಅಧಿಕಾರಿ/ಸಿಬ್ಬಂದಿಯವರು ಅರ್ಜಿ ಹಾಗೂ ಅವಶ್ಯಕ ದಾಖಲಾತಿಗಳೊಂದಿಗೆ ಈ ಕಾರ್ಯಾಲಯದಲ್ಲಿ **ದಿನಾಂಕ: 05.03.2020 ರಂದು ಸಂಜೆ: 5.30 ರೊಳಗೆ (ರಜಾದಿನ ಹೊರತುಪಡಿಸಿ)** ಕಛೇರಿ ವೇಳೆಯಲ್ಲಿ ಸಲ್ಲಿಸಬಹುದಾಗಿದೆ. **ದಿನಾಂಕ 06.03.2020 ರಂದು ಮಧ್ಯಾನ 3.30 ಗಂಟೆಗೆ ದಾಖಲಾತಿಗಳ ಪರಿಶೀಲನೆ ಸಾಯಂಕಾಲ 4.00 ಗಂಟೆಗೆ ಸಂದರ್ಶನ** ಮಂಡಳಿಯ ಕಾರ್ಯಲಯದಲ್ಲಿ ನಿಗದಿಪಡಿಸಲಾಗಿರುತ್ತದೆ. ಹೆಚ್ಚಿನ ವಿವರಗಳನ್ನು ಕಚೇರಿಯ ಕೆಲಸದ ದಿನಗಳಲ್ಲಿ ಸಂಪರ್ಕಿಸಿ, ಪಡೆದುಕೊಳ್ಳಬಹುದಾಗಿದೆ.

ಜಂಟಿನಿರ್ದೇಶಕರು
ಕ ಕ ಪ್ರ ಅ ಮಂಡಳಿ ಕಲಬುರಗಿ